ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಶುಕ್ರವಾರ, ದಿನಾಂಕ : 06 ನೇ ಮಾರ್ಚ್, 2020

ಸಾರಿಗೆ ಸಂಸ್ಥೆಗಳಲ್ಲಿ ಕೆಲಸ ಮಾಡುತ್ತಿರುವ ಸಿಬ್ಬಂದಿಗಳ ಬಗ್ಗೆ

ಶ್ರೀ ಕಾಂತರಾಜ್ (ಬಿಎಂಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

305 (365) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ/ರಾಜ್ಯ ರಸ್ತೆ ಸಾರಿಗೆ ಸಂಸ್ಥೆ/ವಾಯುವ್ಯ/ನೈರುತ್ಯ ಸಾರಿಗೆ ಸಂಸ್ಥೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಒಟ್ಟು ಸಿಬ್ಬಂದಿಗಳ ಸಂಖ್ಯೆ ಎಷ್ಟು; (ಎಲ್ಲಾ ವೃಂದದ ಹುದ್ದೆಗಳು ಸೇರಿದಂತೆ)

(ಆ) ಕಳೆದ ಒಂದು ವರ್ಷದಲ್ಲಿ ನಿವೃತ್ತಿ ಹೊಂದಿದ ಅಧಿಕಾರಿ/ ನೌಕರರ ಸಂಖ್ಯೆ ಎಷ್ಟು; (ವಿವರವಾದ ಮಾಹಿತಿ ನೀಡುವುದು)

(ಇ) ನಿವೃತ್ತಿ ಹೊಂದಿದ ಎಷ್ಟು ದಿನಗಳೊಳಗಾಗಿ ಇವರಿಗೆ ಬರಬೇಕಾದ ಪಿಂಚಣಿ/ಪಿ.ಎಫ್/ಇತರೆ ಸೌಲಭ್ಯಗಳನ್ನು ನೀಡಲಾಗುವುದು; ಇವರುಗಳ ಸಂಖ್ಯೆ ಎಷ್ಟು; (ವಿವರ ನೀಡುವುದು)

(ಈ) ಎಷ್ಟು ಜನ ಅಧಿಕಾರಿಗಳಿಗೆ /ನೌಕರರಿಗೆ ಪಿಂಚಣಿ/ಪಿ.ಎಫ್/ ಇತರೆ ಸೌಲಭ್ಯಗಳನ್ನು ಎಷ್ಟು ತಿಂಗಳಿಂದ ನೀಡಿಲ್ಲ; ಇದಕ್ಕೆ ಕಾರಣವೇನು; (ಸಂಪೂರ್ಣ ವಿವರ ನೀಡುವುದು)

(ಉ) ನಿವೃತ್ತಿ ಹೊಂದಿದ ನೌಕರರಿಗೆ ಎಷ್ಟು ದಿನಗಳೊಳಗಾಗಿ ಸದರಿ ಸೌಲಭ್ಯಗಳನ್ನು ನೀಡಲಾಗುವುದು? (ಸಾರಿಗೆ ಸಂಸ್ಥೆಗಳಿಗೆ ಅನ್ವಯವಾಗುವಂತೆ ಪ್ರತ್ಯೇಕವಾಗಿ ಸ್ಪಷ್ಟ ಸಂಪೂರ್ಣ ವಿವರ ನೀಡುವುದು)